ಕರ್ನಾಟಕ ಪರೀಕ್ಷಾ ಪ್ರಾಧಿಕಾರ

**ಬೆಂಗಳೂರು**

**ಡಿಸಿಇಟಿ–2021 – ಇಂಜಿನಿಯರಿಂಗ್ / ಆರ್ಕಿಟೆಕ್ಚರ್ ಕೋರ್ಸುಗಳಿಗೆ ಮೊದಲನೇ ಸುತ್ತಿನ ಸೀಟು ಹಂಚಿಕೆ**

**ಸೀಟು ಹಂಚಿಕೆಯ ನಂತರದ ಕಾರ್ಯವಿಧಾನಗಳು – Choice ಗಳನ್ನು ಆಯ್ಕೆ ಮಾಡುವುದು.**

**ದಿನಾಂಕ: 29–12–2021**

**ಮೊದಲನೇ** ಸುತ್ತಿನ ಸೀಟು ಹಂಚಿಕೆಯ ಫಲಿತಾಂಶವನ್ನು ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ಅಭ್ಯರ್ಥಿಗಳಿಗೆ ಈ ಕೆಳಗೆ ವಿವರಿಸಿರುವಂತೆ ನಿರ್ಣಯಗಳನ್ನು ತೆಗೆದುಕೊಳ್ಳ ಬಹುದಾಗಿರುತ್ತದೆ.

**ಮೊದಲನೇ** ಸುತ್ತಿನ ಸೀಟು ಹಂಚಿಕೆಯ ನಂತರ, ಸೀಟು ಹಂಚಿಕೆಯಾದ ಅಭ್ಯರ್ಥಿಗಳಿಗೆ ವಿವಿಧ ನಾಲ್ಕು Choice ಗಳನ್ನು ನೀಡಲಾಗುವುದು. ಅಭ್ಯರ್ಥಿಗಳು ನಾಲ್ಕು Choice ಗಳಲ್ಲಿ ತಮಗೆ ಸರಿ ಎನಿಸುವ ಯಾವುದಾದರೂ ಒಂದು Choice ಅನ್ನು ಆಯ್ಕೆ ಮಾಡುವ ಮೊದಲು, ಪ್ರತಿ Choice ಗಳ ವಿವರಣೆಯನ್ನು ಓದಿ ಸರಿಯಾಗಿ ಅರ್ಥೈಸಿಕೊಂಡು, ತಮಗೆ ಸೂಕ್ತವೆನಿಸಿದ Choice ಅನ್ನು ಆಯ್ಕೆ ಮಾಡಿಕೊಳ್ಳಲು ಸೂಚಿಸಿದೆ. ನಾಲ್ಕು Choice ಗಳಲ್ಲಿ ಯಾವುದೇ Choice ಅನ್ನು ಆಯ್ಕೆ ಮಾಡದಿರುವ ಅಭ್ಯರ್ಥಿಗಳು ಮುಂದಿನ ಸುತ್ತುಗಳಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆಯುವುದಿಲ್ಲ.

ಅಭ್ಯರ್ಥಿಗಳು CHOICE ಗಳನ್ನು ಆಯ್ಕೆ ಮಾಡಿಕೊಳ್ಳಲು, ಚಲನ್ ಅನ್ನು ಡೌನ್ ಲೋಡ್ ಮಾಡಿಕೊಳ್ಳಲು, ಬ್ಯಾಂಕಿನಲ್ಲಿ ಶುಲ್ಕ ಪಾವತಿ ಮಾಡಲು ಮತ್ತು ಪ್ರವೇಶ ಆದೇಶ ಪತ್ರವನ್ನು ಡೌನ್ ಲೋಡ್ ಮಾಡಿಕೊಳ್ಳಲು ಪ್ರಾಧಿಕಾರಕ್ಕೆ ಭೇಟಿ ನೀಡುವ ಅವಶ್ಯಕತೆ ಇರುವುದಿಲ್ಲ. ಈ ಮೇಲಿನ ಎಲ್ಲಾ ಚಟುವಟಿಕೆಗಳಿಗೆ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಗೆ ಭೇಟಿ ನೀಡಲು ಕೋರಿದೆ.

**ಮೊದಲನೇ** ಸುತ್ತಿನಲ್ಲಿ ಯಾವುದೇ ಸೀಟು ಹಂಚಿಕೆಯಾಗದ ಅಭ್ಯರ್ಥಿಗಳಿಗೆ ಯಾವುದೇ Choice ಅನ್ನು ಆಯ್ಕೆ ಮಾಡುವ ಅವಕಾಶ ಇರುವುದಿಲ್ಲ. ಅಂತಹ ಅಭ್ಯರ್ಥಿಗಳು ಈಗಾಗಲೇ ದಾಖಲಿಸಿರುವ ಇಚ್ಛೆ / ಆಯ್ಕೆಗಳೊಂದಿಗೆ ಮುಂದಿನ ಸುತ್ತಿನ ಸೀಟು ಹಂಚಿಕೆಯಲ್ಲಿ ಭಾಗವಹಿಸಬಹುದು.

**ಮೊದಲನೇ** ಸುತ್ತಿನಲ್ಲಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳಿಗೆ Choice ಗಳ ವಿವರಣೆಯನ್ನು ಹಾಗು Choice ಆಯ್ಕೆ ಮಾಡಿಕೊಂಡ ನಂತರದ ಕ್ರಮಗಳನ್ನು ಮುಂದಿನ ಪುಟಗಳಲ್ಲಿ ನೀಡಲಾಗಿದೆ.

## CHOICES ಗಳ ವಿವರಣೆ

**Choice-1** – ನನಗೆ **DCET-2021** **ಮೊದಲನೇ** ಸುತ್ತಿನಲ್ಲಿ ಹಂಚಿಕೆಯಾದ ಸೀಟು ಸಂಪೂರ್ಣವಾಗಿ ಇಷ್ಟವಾಗಿದ್ದು ನಾನು ಕಾಲೇಜಿಗೆ ಸೇರುತ್ತೇನೆ, ನನಗೆ ಯಾವುದೇ ಬದಲಾವಣೆ ಅವಶ್ಯಕತೆ ಇರುವುದಿಲ್ಲ. ಮುಂದಿನ ಸುತ್ತುಗಳಲ್ಲಿ ಭಾಗವಹಿಸಲೂ ಸಹ ನನಗೆ ಇಷ್ಟವಿರುವುದಿಲ್ಲ, ಆದ್ದರಿಂದ ನನ್ನನ್ನು ಮುಂದಿನ ಯಾವುದೇ ಸುತ್ತುಗಳಲ್ಲಿ ಸೀಟು ಹಂಚಿಕೆಗೆ ಪರಿಗಣಿಸಬಾರದು. ನಾನು **ಮೊದಲನೇ** ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸಿ, ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶ ಪಡೆಯುತ್ತೇನೆ ನಂತರ ಲಾಗಿನ್ ಮಾಡಿ ಕಾಲೇಜಿನಲ್ಲಿ ಪ್ರವೇಶ ಪಡೆದ ಬಗ್ಗೆ ಮಾಹಿತಿಯನ್ನು ಸಲ್ಲಿಸುತ್ತೇನೆ ಎಂದು ಧೃಡೀಕರಿಸುತ್ತೇನೆ.

ಕ್ರಮ: ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ಕ್ರಮವಹಿಸುವುದಾಗಿದ್ದರೆ, ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್‌ನಲ್ಲಿ **Choice 1**ಅನ್ನು ಆಯ್ಕೆ ಮಾಡಿಕೊಂಡು ಮುಂದಿನ ಕ್ರಮವಹಿಸಬಹುದು.

ಮುಖ್ಯವಾದುದು: **Choice 1**ಅನ್ನು ಆಯ್ಕೆ ಮಾಡಿಕೊಳ್ಳುವ ಅಭ್ಯರ್ಥಿಗಳು ಡಿಸಿಇಟಿ – 2021ರ **ಇಂಜಿನಿಯರಿಂಗ್ / ಆರ್ಕಿಟೆಕ್ಚರ್ ಸೀಟು ಹಂಚಿಕೆಯ** ಮುಂದಿನ ಯಾವುದೇ ಸುತ್ತುಗಳಲ್ಲಿ ಭಾಗವಹಿಸಲು ಅರ್ಹತೆಯನ್ನು ಪಡೆಯುವುದಿಲ್ಲ.

ಶುಲ್ಕವನ್ನು ಪಾವತಿಸಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿ ಕಾಲೇಜಿನಲ್ಲಿ ಪ್ರವೇಶ ಪಡೆಯಲು ವಿಫಲರಾದಲ್ಲಿ ಅಂತಹ ಅಭ್ಯರ್ಥಿಗಳು ಪಡೆದ ಸೀಟುಗಳು ರದ್ದಾಗುತ್ತದೆ ಹಾಗು ಶುಲ್ಕವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.

**Choice-2 – ನನಗೆ DCET-2021 ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟು ಇಷ್ಟವಾಗಿರುತ್ತದೆ, ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುತ್ತೇನೆ,** ಆದರೆ ನಾನು ಇನ್ನೂ ಉತ್ತಮವಾದ ಸೀಟನ್ನು ಪಡೆಯಲು ಮುಂದಿನ ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತೇನೆ. ಮುಂದಿನ ಎರಡನೇ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ higher order options ಗಳಲ್ಲಿ ಯಾವುದೇ ಸೀಟು ಹಂಚಿಕೆಯಾದಲ್ಲಿ, ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಕಾಲೇಜಿನಲ್ಲಿ ನಿಗದಿತ ದಿನಾಂಕದೊಳಗೆ ಪ್ರವೇಶ ಪಡೆಯುತ್ತೇನೆ, ಒಂದುವೇಳೆ ಮುಂದಿನ ಎರಡನೇ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ higher order options ಗಳಲ್ಲಿ ಯಾವುದೇ ಸೀಟು ಹಂಚಿಕೆಯಾಗದಿದ್ದಲ್ಲಿ, ಈಗಾಗಲೇ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಪ್ರವೇಶ ಪಡೆಯಲು ಇಚ್ಛಿಸುತ್ತೇನೆ ಎಂದು ಧೃಡೀಕರಿಸುತ್ತೇನೆ.

ಕ್ರಮ: ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ಕ್ರಮವಹಿಸುವುದಾಗಿದ್ದರೆ, ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್‌ನಲ್ಲಿ **Choice 2** ಅನ್ನು ಆಯ್ಕೆ ಮಾಡಿಕೊಂಡು ಎರಡನೇ ಸುತ್ತಿನಲ್ಲಿ ಭಾಗವಹಿಸಬಹುದು.

**ಮುಖ್ಯವಾದುದು:** ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟನ್ನು ತಮ್ಮ ಬಳಿ ಇಟ್ಟುಕೊಂಡು (Hold ಮಾಡಿ) ಎರಡನೇ ಸುತ್ತಿನಲ್ಲಿ ಭಾಗವಹಿಸಬಹುದು. ಅಭ್ಯರ್ಥಿಗಳಿಗೆ ಎರಡನೇ ಸುತ್ತಿನಲ್ಲಿ higher order options ಗಳಿಗೆ ಮಾತ್ರ ಸೀಟು ಆಯ್ಕೆಗೆ ಪರಿಗಣಿಸಲಾಗುವುದು. ಎರಡನೇ ಸುತ್ತಿನಲ್ಲಿ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಪ್ರಕ್ರಿಯೆ ಪ್ರಾರಂಭಿಸಿದ ನಂತರ ಮೊದಲನೇ ಸುತ್ತಿನಲ್ಲಿ ಅಭ್ಯರ್ಥಿಗಳು ದಾಖಲಿಸಿದ higher order options ಗಳನ್ನು ಮಾತ್ರ ತೋರಿಸಲಾಗುವುದು, ಅಭ್ಯರ್ಥಿಗಳು higher order options ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ options ಬೇಡವಾದಲ್ಲಿ ತೆಗೆದು ಹಾಕಬಹುದು.

ವಿವರಣೆ: Choice-2 ಅಭ್ಯರ್ಥಿಗಳು ಎರಡನೇ ಸುತ್ತಿನಲ್ಲಿ ಭಾಗವಹಿಸಲು ಇಚ್ಚಿಸಿರುತ್ತಾರೆ ಎಂದರೆ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗಿಂತ ಉತ್ತಮವಾದ ಸೀಟನ್ನು ಆಯ್ಕೆ ಮಾಡಿಕೊಳ್ಳಲು ಭಾಗವಹಿಸುತ್ತಾರೆ. ಎರಡನೇ ಸುತ್ತಿನಲ್ಲಿ ಅಭ್ಯರ್ಥಿಗಳಿಗೆ ಯಾವುದೇ ಮೇಲ್ಪಟ್ಟ ಆದ್ಯತೆಗಳ ಸೀಟು ಅಂದರೆ ಹಂಚಿಕೆಯಾದ ಸೀಟಿನ ಮೇಲ್ಪಟ್ಟ ಇಚ್ಚೆ / ಆಯ್ಕೆಗಳು (Higher order Options means, options entered above the allotted option) ದೊರಕದಿದ್ದಲ್ಲಿ ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟೇ ಉಳಿಯುತ್ತದೆ.

**ಗಮನಿಸಿ:** ಅಭ್ಯರ್ಥಿ ತಮ್ಮ ರ‍್ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ.

**Choice-3:** ಅಭ್ಯರ್ಥಿಯು ತನಗೆ **DCET-2021** ಮೊದಲನೇ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ, ನಾನು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟನ್ನು ರದ್ದುಪಡಿಸಿಕೊಂಡು ಮುಂದಿನ ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತೇನೆ ಎಂದು ಧೃಡೀಕರಿಸುತ್ತೇನೆ.

ಕ್ರಮ: ಅಭ್ಯರ್ಥಿಗಳು ಈ ಮೇಲಿನ ರೀತಿಯಲ್ಲಿ ಕ್ರಮವಹಿಸಲು ನಿರ್ಣಯಿಸಿದರೆ Choice-3 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬೇಕು.

ಮುಖ್ಯವಾದುದು: Choice-3 ಅನ್ನು ಆಯ್ಕೆ ಮಾಡಿಕೊಂಡಿರುವ ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಹಂಚಿಕೆಯಾದ ಸೀಟಿಗೆ ಶುಲ್ಕವನ್ನು ಪಾವತಿಸುವ ಅಗತ್ಯವಿರುವುದಿಲ್ಲ. Choice-3 ಅಭ್ಯರ್ಥಿಗಳು ಮೊದಲನೇ ಸುತ್ತಿನಲ್ಲಿ ಆಯ್ಕೆಯಾದ ಸೀಟನ್ನು ರದ್ದುಪಡಿಸಿಕೊಂಡು (ತಮ್ಮೊಡನೆ ಉಳಿಸಿಕೊಳ್ಳದೆ) ಎರಡನೇ ಸುತ್ತಿನಲ್ಲಿ ಭಾಗವಹಿಸುತ್ತಾರೆ. ಅಂತಹ ಅಭ್ಯರ್ಥಿಗಳಿಗೆ ಎರಡನೇ ಸುತ್ತಿನಲ್ಲಿ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆಯಾದಲ್ಲಿ ಮಾತ್ರ ಅವರು ಸೀಟನ್ನು ಆಯ್ಕೆ ಮಾಡಿಕೊಳ್ಳಬೇಕು.

Choice-3 ಅಭ್ಯರ್ಥಿಗಳಿಗೆ ಎರಡನೇ ಸುತ್ತಿನಲ್ಲಿ ಇಚ್ಛೆ / ಆಯ್ಕೆಗಳನ್ನು ದಾಖಲಿಸುವ ಪ್ರಕ್ರಿಯೆ ಪ್ರಾರಂಭಿಸಿದ ನಂತರ ಮೊದಲನೇ ಸುತ್ತಿನಲ್ಲಿ ಅಭ್ಯರ್ಥಿಗಳು ದಾಖಲಿಸಿದ ಎಲ್ಲಾ **options** ಗಳನ್ನು ತೋರಿಸಲಾಗುವುದು (ಮೊದಲನೇ ಸುತ್ತಿನಲ್ಲಿ ಹಂಚಿಕೆಯಾಗಿ ಅಭ್ಯರ್ಥಿಯು ರದ್ದುಪಡಿಸಿಕೊಂಡ **option** ಅನ್ನು ಹೊರತುಪಡಿಸಿ ಉಳಿದ ಎಲ್ಲಾ ಇಚ್ಛೆ / ಆಯ್ಕೆಗಳು), ಅಭ್ಯರ್ಥಿಗಳು **options** ಗಳನ್ನು ಬದಲಾಯಿಸಿಕೊಳ್ಳಬಹುದು ಅಥವಾ ಆದ್ಯತಾ ಕ್ರಮಗಳನ್ನು ಮಾರ್ಪಡಿಸಿಕೊಳ್ಳಬಹುದು ಅಥವಾ ಯಾವುದಾದರೂ **options** ಬೇಡವಾದಲ್ಲಿ ತೆಗೆದು ಹಾಕಬಹುದು.

**ಗಮನಿಸಿ:** ಅಭ್ಯರ್ಥಿ ತಮ್ಮ ರ್‍ಯಾಂಕ್ ಸರದಿಯ ನಂತರ ಉದ್ಭವಿಸುವ ಸೀಟುಗಳನ್ನು ಪಡೆಯಲು ಹಕ್ಕನ್ನು ಚಲಾಯಿಸುವಂತಿಲ್ಲ

**Choice-4:**_ಅಭ್ಯರ್ಥಿಯು ತಮಗೆ **DCET-2021** ಮೊದಲನೇ ಸುತ್ತಿನಲ್ಲಿ ದೊರಕಿರುವ ಸೀಟು ತೃಪ್ತಿಕರವಾಗಿಲ್ಲ ನನಗೆ ದೊರಕಿರುವ ಸೀಟು ಬೇಡ ಹಾಗೂ ನನಗೆ ಮುಂದಿನ ಸುತ್ತಿನಲ್ಲೂ ಸಹ ಯಾವುದೂ ಸೀಟು ತೆಗೆದುಕೊಳ್ಳಲು ಇಷ್ಟವಿಲ್ಲ, ನಾನು ಬೇರೆ ಸಂಸ್ಥೆಯಿಂದ ಸೀಟು ತೆಗೆದುಕೊಳ್ಳುತ್ತೇನೆ ಎಂದು ಧೃಡೀಕರಿಸುತ್ತೇನೆ.

**ಕ್ರಮ: ಅಭ್ಯರ್ಥಿಗಳು** ಈ ಮೇಲಿನಂತೆ ನಿರ್ಣಯಿಸಿದಲ್ಲಿ, Choice-4 ಅನ್ನು ಪ್ರಾಧಿಕಾರದ ವೆಬ್‌ಸೈಟ್ ನಲ್ಲಿ ಆಯ್ಕೆ ಮಾಡಿಕೊಳ್ಳಬಹುದು.

ಗಮನಿಸಿ: Choice-4 ಅನ್ನು ಆಯ್ಕೆ ಮಾಡಿಕೊಳ್ಳುವ ಅಭ್ಯರ್ಥಿಯು ಡಿಸಿಇಟಿ–2021ರ **ಇಂಜಿನಿಯರಿಂಗ್ / ಕೋರ್ಸುಗಳ** ಸೀಟು ಹಂಚಿಕೆಗೆ ಮುಂದಿನ ಯಾವುದೇ ಸುತ್ತುಗಳಲ್ಲಿ ಭಾಗವಹಿಸಲು ಅರ್ಹನಾಗುವುದಿಲ್ಲ.